March 24, 2024

ALL INDIA RADIO- DHARWAD

PRADESH SAMACHARA (KANNADA) 7:05 AM

ಮುಖ್ಯಾಂಶಗಳು

- ಸಂವಿಧಾನದ ಆಶಯಗಳನ್ನು ಎತ್ತಿ ಹಿಡಿಯುವಲ್ಲಿ ನ್ಯಾಯಾಂಗದ ಪಾತ್ರ ಅನನ್ಯ– ಮುಖ್ಯಮಂತ್ರಿ ಸಿದ್ದರಾಮಯ್ಯ
- ಲೋಕಸಭಾ ಚುನಾವಣೆ: ಮುಕ್ತ ಮತ್ತು ನ್ಯಾಯಸಮ್ಮತವಾಗಿ ನಡೆಸಲು ಕೇಂದ್ರ ಚುನಾವಣಾ ಆಯೋಗದಿಂದ 2,100 ಚುನಾವಣಾ ವೀಕ್ಷಕರ ನಿಯೋಜನೆ.
- ಈ ಬಾರಿಯ ಲೋಕಸಭಾ ಚುನಾವಣೆಯಲ್ಲಿ ಪಕ್ಷ ಅತಿ ಹೆಚ್ಚು ಸ್ಥಾನಗಳನ್ನು ಗೆಲ್ಲಲಿದೆ– ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ.
- ಬೇಸಿಗೆ ಸಂದರ್ಭದಲ್ಲಿ ರಾಜ್ಯದ ಹಲವು ಜಿಲ್ಲೆಗಳಲ್ಲಿ ನೀರಿನ ಸಮಸ್ಯೆ: ಆರಂಭಗೊಂಡ ಅಗತ್ಯ ಮುನ್ನೆಚ್ಚರಿಕೆ ಕ್ರಮಗಳು.

ಈಗ ವಾರ್ತೆಗಳ ವಿವರ

*******

ಸಂವಿಧಾನದ ಆಶಯಗಳನ್ನು ಎತ್ತಿ ಹಿಡಿಯುವಲ್ಲಿ ಭಾರತದ ನ್ಯಾಯಾಂಗ ಪ್ರಮುಖ ಪಾತ್ರ ವಹಿಸುತ್ತಾ ಬಂದಿದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಅಭಿಪ್ರಾಯಪಟ್ಟಿದ್ದಾರೆ.

ಬೆಂಗಳೂರಿನಲ್ಲಿ ನಿನ್ನೆ ರಾಜ್ಯಮಟ್ಟದ ನ್ಯಾಯಾಂಗ ಅಧಿಕಾರಿಗಳ 21ನೇ ದ್ವೈವಾರ್ಷಿಕ ಸಮಾವೇಶದಲ್ಲಿ ಪಾಲ್ಗೊಂಡು ಮಾತನಾಡಿದ ಅವರು, ಮೂಲಭೂತ ಹಕ್ಕುಗಳಿಗೆ ಸಂಬಂಧಿಸಿದಂತೆ ಮಹತ್ತರವಾದ ತೀರ್ಪುಗಳನ್ನು ನೀಡುವ ಮೂಲಕ ನ್ಯಾಯಾಂಗ ತನ್ನ ಹಿರಿಮೆಯನ್ನು ಹೆಚ್ಚಿಸಿಕೊಂಡಿದೆ ಎಂದರು.

ನ್ಯಾಯ ಉಳ್ಳವರಿಗೆ ಮಾತ್ರವಲ್ಲದೆ ದುರ್ಬಲರಿಗೂ ದೊರೆಯುವಂತಾಗಬೇಕು. ಸಮಾಜದಲ್ಲಿನ ಕಟ್ಟ ಕಡೆಯ ವ್ಯಕ್ತಿಗೂ ನ್ಯಾಯ ದೊರೆಯಬೇಕು. ನ್ಯಾಯ ಪಡೆಯುವಿಕೆ ಸೇವೆ, ಅಥವಾ ಸವಲತ್ತಾಗದೇ ಅದೊಂದು ಹಕ್ಕಾಗಬೇಕು ಎಂದು ಮುಖ್ಯಮಂತ್ರಿ ಹೇಳಿದರು.

*******

2024 ರ ಸಾರ್ವತ್ರಿಕ ಚುನಾವಣೆಗೆ ಭಾರತ ಚುನಾವಣಾ ಆಯೋಗ ಸಜ್ಜಾಗಿದ್ದು, ಚುನಾವಣೆಯನ್ನು ಮುಕ್ತ ಮತ್ತು ನ್ಯಾಯಸಮ್ಮತವಾಗಿ ನಡೆಸುವ ಸಲುವಾಗಿ ಆಯೋಗ, 2,100 ಚುನಾವಣಾ ವೀಕ್ಷಕರ ಸಶಕ್ತ ತಂಡವೊಂದನ್ನು ನಿಯೋಜಿಸಿದೆ.

ಈ ಚುನಾವಣಾ ವೀಕ್ಷಕರು ಹಲವು ಗುರುತರ ಜವಾಬ್ದಾರಿಗಳೊಂದಿಗೆ ಜಿಲ್ಲಾ ಚುನಾವಣಾಧಿಕಾರಿಗಳು ಮತ್ತು ಮತಗಟ್ಟೆ ಅಧಿಕಾರಿಗಳ ಕಾರ್ಯ ನಿರ್ವಹಣೆಯ ಮೇಲೆ ನಿಗಾವಹಿಸಲಿದ್ದಾರೆ.

ಚುನಾವಣಾ ಪ್ರಕ್ರಿಯೆ ಅವಧಿಯಲ್ಲಿ ಯಾವುದೇ ರೀತಿಯ ಪ್ರಚೋದನೆ, ಬೆದರಿಕೆ ಅಥವಾ ಒತ್ತಾಯದ ಪ್ರಕರಣಗಳನ್ನು ಗಮನಿಸಲಿರುವ ಈ ವೀಕ್ಷಕರು, ಶಾಂತಿಯುತ ಮತದಾನಕ್ಕೆ ಅಗತ್ಯವಾದ ಭದ್ರತಾ ಪಡೆಗಳ ನಿಯೋಜನೆ ಹಾಗೂ ಸಾಗಾಟ ಈ ವೀಕ್ಷಕರ ಮೇಲುಸ್ತುವಾರಿಯಲ್ಲಿ ನಡೆಯಲಿದೆ. ವೀಕ್ಷಕರು ತಮ್ಮ ವ್ಯಾಪ್ತಿಯ ಮತ ಕೇಂದ್ರಗಳಿಗೆ ನಿಯಮಿತವಾಗಿ ಭೇಟಿ ನೀಡಲು ಆಯೋಗ ವೀಕ್ಷಕರಿಗೆ ನಿರ್ದೇಶನ ನೀಡಿದೆ.

*******

ಲೋಕಸಭಾ ಚುನಾವಣೆ ಹಿನ್ನೆಲೆ, ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಬೆಂಗಳೂರಿನ ಕಾಂಗ್ರೆಸ್ ಭವನದಲ್ಲಿ ನಿನ್ನೆ ಪಕ್ಷದ ವಿಧಾನಸಭೆ ಮತ್ತು ವಿಧಾನಪರಿಷತ್ ಸದಸ್ಯರೊಂದಿಗೆ ಸಮಾಲೋಚನೆ ನಡೆಸಿದರು.

ನಂತರ ಮಾಜಿ ಶಾಸಕರು ಹಾಗೂ ಜಿಲ್ಲಾ ಕಾಂಗ್ರೆಸ್ ಅಧ್ಯಕ್ಷರು, ವಿವಿಧ ನಿಗಮ ಮಂಡಳಿಗಳ ಅಧ್ಯಕ್ಷರು ಮತ್ತು ಸದಸ್ಯರೊಂದಿಗೆ ಸಭೆ ನಡೆಸಿ ಲೋಕಸಭಾ ಚುನಾವಣೆಯ ಕಾರ್ಯತಂತ್ರಗಳ ಬಗ್ಗೆ ಚರ್ಚೆ ನಡೆಸಿದರು.

ರಾಜ್ಯದಲ್ಲಿ ಮೊದಲ ಹಂತದಲ್ಲಿ ನಡೆಯಲಿರುವ 14 ಲೋಕಸಭಾ ಕ್ಷೇತ್ರಗಳ ವ್ಯಾಪ್ತಿಯ ವಿಧಾನಸಭೆ ಮತ್ತು ವಿಧಾನಪರಿಷತ್ ಶಾಸಕರೊಂದಿಗೂ ಸಮಾಲೋಚನೆ ನಡೆಸಿ, ಕಾರ್ಯತಂತ್ರಗಳ ಕುರಿತು ಚರ್ಚೆ ನಡೆಸಿದರು.

*******

ಈ ಬಾರಿ ಲೋಕಸಭಾ ಚುನಾವಣೆಯಲ್ಲಿ ಪಕ್ಷ ಅತಿ ಹೆಚ್ಚು ಸ್ಥಾನಗಳನ್ನು ಗೆಲ್ಲಲಿದೆ ಎಂದು ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ. ವಿಜಯೇಂದ್ರ ಹೇಳಿದ್ದಾರೆ.

ಬೆಂಗಳೂರಿನಲ್ಲಿ ನಿನ್ನೆ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ರಾಜ್ಯದಲ್ಲಿ ಕಾಂಗ್ರೆಸ್ ಸರ್ಕಾರ, ಜನಪರ ಆಡಳಿತ ನೀಡುವಲ್ಲಿ ಮತ್ತು ಬರಪರಿಸ್ಥಿತಿ ನಿರ್ವಹಣೆಯಲ್ಲಿ ಸಂಪೂರ್ಣ ವಿಫಲವಾಗಿದೆ ಎಂದು ಆಪಾದಿಸಿದರು.

ಲೋಕಸಭಾ ಚುನಾವಣೆಗೆ ರಾಜ್ಯದಲ್ಲಿ ಅತಿಹೆಚ್ಚು ಸ್ಥಾನಗಳನ್ನು ಗೆಲ್ಲುವ ಉದ್ದೇಶದಿಂದ ಕಾರ್ಯತಂತ್ರ ರೂಪಿಸಲು 200 ಕ್ಕೂ ಹೆಚ್ಚು ಕಾರ್ಯಕರ್ತರಿಗೆ ಕಾರ್ಯಾಗಾರ ನಡೆಸಲು ಬಿಜೆಪಿ ನಿರ್ಧರಿಸಿದೆ ಎಂದು ಅವರು ತಿಳಿಸಿದರು.

*******

ಬೇಸಿಗೆ ಸಂದರ್ಭದಲ್ಲಿ ರಾಜ್ಯದ ಹಲವು ಜಿಲ್ಲೆಗಳಲ್ಲಿ ನೀರಿನ ಸಮಸ್ಯೆ ಎದುರಾಗಿದ್ದು, ಅಗತ್ಯ ಮುನ್ನೆಚ್ಚರಿಕೆ ಕ್ರಮಗಳನ್ನು ಆರಂಭಿಸಲಾಗಿದೆ.

ಬೇಸಿಗೆ ಸಮಯದಲ್ಲಿ ಜಿಲ್ಲೆಯ ಯಾವುದೇ ಗ್ರಾಮದಲ್ಲಿ ಕುಡಿಯುವ ನೀರಿನ ವ್ಯತ್ಯಯವಾಗಬಾರದು. ಸಮಸ್ಯಾತ್ಮಕ ಗ್ರಾಮಗಳಲ್ಲಿ ಅಗತ್ಯ ಮುನ್ನೆಚ್ಚರಿಕಾ ಕ್ರಮಗಳೊಂದಿಗೆ ಕುಡಿಯುವ ನೀರು ಪೂರೈಸಲು ಮೊದಲ ಆದ್ಯತೆ ನೀಡಿ ಎಂದು ಕೊಪ್ಪಳ ಜಿಲ್ಲಾಧಿಕಾರಿ ನಲಿನ್ ಅತುಲ್ ಅಧಿಕಾರಿಗಳಿಗೆ ಸೂಚನೆ ನೀಡಿದ್ದಾರೆ.

ಜಿಲ್ಲಾಧಿಕಾರಿ ಕಚೇರಿ ಸಭಾಂಗಣದಲ್ಲಿ ನಿನ್ನೆ ನಡೆದ ಬರ ನಿರ್ವಹಣೆ ಮತ್ತು ಕುಡಿಯುವ ನೀರು ಪೂರೈಕೆ ಕುರಿತ ಪ್ರಗತಿ ಪರಿಶೀಲನಾ ಸಭೆಯಲ್ಲಿ ಈ ಸೂಚನೆ ನೀಡಿದ ಅವರು, ಗ್ರಾಮ ಹಾಗೂ ನಗರ ಪ್ರದೇಶಗಳಲ್ಲಿ ಸರ್ಕಾರಿ ಬೋರವೆಲ್‌ಗಳಿಂದ ಕುಡಿಯುವ ನೀರು ಸರಬರಾಜು ಮಾಡಬೇಕು. ಒಂದು ವೇಳೆ ಸರ್ಕಾರಿ ಬೋರವೆಲ್‌ಗಳಲ್ಲಿ ನೀರಿನ ಪ್ರಮಾಣ ಕಡಿಮೆಯಾಗಿದ್ದಲ್ಲಿ ಖಾಸಗಿ ಬೋರವೆಲ್ ಮಾಲೀಕರೊಂದಿಗೆ ಒಪ್ಪಂದ ಮಾಡಿಕೊಂಡು ನೀರು ಸರಬರಾಜು ಮಾಡಬೇಕು ಎಂದು ಸೂಚಿಸಿದರು.

*******

ಹಾವೇರಿ ನಗರಕ್ಕೆ ಮೂರ್ನಾಲ್ಕು ದಿನಗಳಲ್ಲಿ ಪೈಪ್‌ಲೈನ್ ಮೂಲಕ ಹೆಗ್ಗೇರಿ ಕೆರೆಯ ನೀರು ಸರಬರಾಜು ಮಾಡಲಾಗುವುದು ಎಂದು ಜಿಲ್ಲಾಧಿಕಾರಿ ರಘುನಂದನ ಮೂರ್ತಿ ತಿಳಿಸಿದ್ದಾರೆ.

ಹಾವೇರಿಯಲ್ಲಿ ನಿನ್ನೆ ಈ ವಿಷಯ ತಿಳಿಸಿದ ಅವರು, ಕೆರೆ ನೀರನ್ನು ಸಂಸ್ಕರಿಸಿದ ನಂತರ ಮನೆಗಳಿಗೆ ಪೂರೈಸಲಾಗುವುದು. ಈ ನೀರು ಕುಡಿಯಲು ಯೋಗ್ಯವಲ್ಲ. ಕೇವಲ ದೈನಂದಿನ ಬಳಕೆಗೆ ಮಾತ್ರ ಉಪಯೋಗಿಸಬೇಕು. ಕುಡಿಯುವ ನೀರಿಗಾಗಿ ಹರಿಸಲಾಗಿದ್ದ ತುಂಗಭದ್ರಾ ನದಿ ನೀರು ಇನ್ನು ಮೂರು ದಿನಗಳಲ್ಲಿ ಖಾಲಿಯಾಗಲಿದೆ. ಹಾಗಾಗಿ ಕುಡಿಯಲು ನಗರಸಭೆ ಕೊಳವೆ ಬಾವಿಗಳ ನೀರನ್ನು ಬಳಸಬಹುದು ಎಂದರು.

ಭದ್ರಾ ಜಲಾಶಯದಿಂದ ತುಂಗಭದ್ರಾ ನದಿಗೆ ಮುಂದಿನ ವಾರದ ವೇಳೆಗೆ ನೀರು ಬಿಡುಗಡೆ ಮಾಡುವ ನಿರೀಕ್ಷೆಯಿದ್ದು, ನದಿಗೆ ನೀರು ಬಂದರೆ ಮುಂದಿನ ದಿನಗಳಲ್ಲಿ ಹಾವೇರಿ ನೀರಿನ ಸಮಸ್ಯೆ ಪರಿಹಾರವಾಗಲಿದೆ. ಜಿಲ್ಲೆಯ ಗ್ರಾಮೀಣ ಪ್ರದೇಶಗಳಲ್ಲಿ 149 ಖಾಸಗಿ ಕೊಳವೆ ಬಾವಿಗಳನ್ನು ಬಾಡಿಗೆ ಆಧಾರದ ಮೇಲೆ ಪಡೆದು ನೀರು ಪೂರೈಸಲಾಗುತ್ತಿದೆ ಎಂದು ಜಿಲ್ಲಾಧಿಕಾರಿ ತಿಳಿಸಿದರು.

*******

ಪ್ರದೇಶ ಸಮಾಚಾರ ಕೇಳುತ್ತಿದ್ದೀರಿ

*******

ಲೋಕಸಭಾ ಚುನಾವಣೆ ಹಿನ್ನೆಲೆ ನಗರದಲ್ಲಿ ಕಾನೂನು ಸುವ್ಯವಸ್ಥೆಗೆ ಹೆಚ್ಚಿನ ಒತ್ತು ನೀಡಲಾಗಿದ್ದು, ಬಿಗಿ ಕ್ರಮಗಳನ್ನು ಕೈಗೊಳ್ಳಲಾಗುತ್ತಿದೆ ಎಂದು ಮಂಗಳೂರು ನಗರ ಪೊಲೀಸ್ ಆಯುಕ್ತ ಅನುಪಮ ಅಗರ್ವಾಲ್ ತಿಳಿಸಿದ್ದಾರೆ.

ಮುನ್ನೆಚ್ಚರಿಕಾ ಕ್ರಮವಾಗಿ ನಗರ ಪೊಲೀಸ್ ಆಯುಕ್ತಾಲಯ ವ್ಯಾಪ್ತಿಯಲ್ಲಿ ಕ್ರಿಮಿನಲ್ ಚಟುವಟಿಕೆಗಳಲ್ಲಿ ನಿರತರಾಗಿರುವ, 12 ಮಂದಿ ಆರೋಪಿಗಳನ್ನುಗಡಿಪಾರು ಮಾಡಿ ಆದೇಶ ಹೊರಡಿಸಲಾಗಿದೆ ಎಂದು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

*******

ಲೋಕಸಭಾ ಚುನಾವಣಾ ಕಾರ್ಯಗಳ ವೀಕ್ಷಣೆ ಮತ್ತು ನಿಯಂತ್ರಣಕ್ಕಾಗಿ ದಾವಣಗೆರೆ ಜಿಲ್ಲಾಧಿಕಾರಿ ಕಚೇರಿಯಲ್ಲಿ ಆರಂಭಿಸಲಾಗಿರುವ ವಾರ್ ರೂಂ ಗೆ ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿ ಹಾಗೂ ಮತದಾರರ ಪಟ್ಟಿ ಜಿಲ್ಲಾ ನೋಡಲ್ ಅಧಿಕಾರಿ ಗುಂಜನ್ ಕೃಷ್ಣ ನಿನ್ನೆ ಭೇಟಿ ನೀಡಿ ಪರಿಶೀಲನೆ ನಡೆಸಿದರು.

ವಿದ್ಯುನ್ಮಾನ ಮಾಧ್ಯಮಗಳ ವೀಕ್ಷಣೆಗಾಗಿ ಟಿ.ವಿ ಅಳವಡಿಕೆ, ಸ್ಥಳೀಯ ಚಾನೆಲ್ ಮತ್ತು ಸಾಮಾಜಿಕ ಜಾಲತಾಣ ವೀಕ್ಷಣೆ ಹಾಗೂ ಪ್ರತಿ ತಾಲ್ಲೂಕಿಗೆ ಚುನಾವಣಾ ಕಾರ್ಯಗಳ ವೀಕ್ಷಣಾ ವರದಿಗಾಗಿ ತಾಲ್ಲೂಕಿಗೊಬ್ಬರಂತೆ ನೋಡಲ್ ಅಧಿಕಾರಿಗಳನ್ನು ನೇಮಕ ಮಾಡಿರುವ ಕುರಿತು ಗುಂಜನ್ ಕೃಷ್ಣ ಮಾಹಿತಿ ಪಡೆದರು.

*******

ಲೋಕಸಭೆ ಚುನಾವಣೆ ಮಾದರಿ ನೀತಿ ಸಂಹಿತೆ ಜಾರಿಯಲ್ಲಿರುವ ಕಾರಣ ಮುದ್ರಣವಾಗುವ ಪ್ರತಿ ಚುನಾವಣಾ ಪ್ರಚಾರ ಸಾಮಗ್ರಿಗಳ ಮೇಲೆ ಮುದ್ರಕರ ಮತ್ತು ಪ್ರಕಾಶರ ಹೆಸರು, ವಿಳಾಸ ಕಡ್ಡಾಯವಾಗಿ ನಮೂದಿಸಬೇಕು ಎಂದು ಯಾದಗಿರಿ ಜಿಲ್ಲಾಧಿಕಾರಿ ಮತ್ತು ಜಿಲ್ಲಾ ಚುನಾವಣಾಧಿಕಾರಿ ಡಾ.ಬಿ.ಸುಶೀಲಾ ತಿಳಿಸಿದ್ದಾರೆ.

ಈ ಕುರಿತು ಪ್ರಕಟಣೆ ಬಿಡುಗಡೆ ಮಾಡಿರುವ ಅವರು, ಮುದ್ರಣಕ್ಕೆ ಬರುವ ರಾಜಕೀಯ ಪಕ್ಷಗಳು, ಅಭ್ಯರ್ಥಿಗಳಿಂದ ಪ್ರತಿ ಚುನಾವಣಾ ಸಾಮಗ್ರಿಗೆ ಪ್ರತ್ಯೇಕವಾಗಿ ಅಪೆಂಡಿಕ್ಸ್ 'ಎ' ನಲ್ಲಿ ದೃಢೀಕರಣ ಪಡೆಯಬೇಕು ಎಂದು ತಿಳಿಸಿದ್ದಾರೆ.

ನಿಯಮ ಉಲ್ಲಂಘಿಸಿದಲ್ಲಿ 6 ತಿಂಗಳ ಶಿಕ್ಷೆ ಅಥವಾ 2 ಸಾವಿರ ರೂಪಾಯಿ ದಂಡ ಅಥವಾ ಎರಡು ವಿಧಿಸುವ ಅವಕಾಶವಿದೆ. ಇದಲ್ಲದೆ ಇತರೆ ಕಾಯ್ದೆಯನ್ವಯ ಲೈಸೆನ್ಸ್ ವಾಪಸ್ ಪಡೆಯುವ ಅಧಿಕಾರ ಹೊಂದಲಾಗಿದೆ ಎಂದು ಜಿಲ್ಲಾಧಿಕಾರಿ ಮಾಹಿತಿ ನೀಡಿದ್ದಾರೆ.

*******

ಬರುವ ಲೋಕಸಭಾ ಚುನಾವಣೆಯಲ್ಲಿ ಮತದಾನ ಪ್ರಮಾಣ ಹೆಚ್ಚಳಕ್ಕೆ ಹಾವೇರಿ ಜಿಲ್ಲಾ ಸ್ವೀಪ್ ಸಮಿತಿಯಿಂದ ಯೋಜಿತ ಕಾರ್ಯಕ್ರಮಗಳನ್ನು ರೂಪಿಸಲಾಗಿದೆ ಎಂದು ಜಿಲ್ಲಾ ಸ್ವೀಪ್ ಸಮಿತಿ ಅಧ್ಯಕ್ಷ ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಅಕ್ಷಯ ಶ್ರೀಧರ್ ತಿಳಿಸಿದ್ದಾರೆ.

ಹಾವೇರಿಯಲ್ಲಿ ನಿನ್ನೆ ಸುದ್ದಿಗಾರರೊಂದಿಗೆ ಮಾತನಾಡಿ ಈ ವಿಷಯ ತಿಳಿಸಿದ ಅವರು, ಕಳೆದ ವಿಧಾನಸಭಾ ಹಾಗೂ ಲೋಕಸಭಾ ಚುನಾವಣೆಯ ಮತದಾನ ಪ್ರಮಾಣಕ್ಕಿಂತ ಕನಿಷ್ಠ ಶೇಕಡಾ 6 ರಷ್ಟು ಹೆಚ್ಚಳ ಮಾಡುವ ನಿಟ್ಟಿನಲ್ಲಿ ಗುರಿ ಹಾಕಿಕೊಳ್ಳಲಾಗಿದೆ ಎಂದರು.

ಈಗಾಗಲೇ ಶಾಲಾ–ಕಾಲೇಜುಗಳಲ್ಲಿ ರಸಪ್ರಶ್ನೆ, ಭಿತ್ತಿಪತ್ರ, ಪ್ರಬಂಧ ಸ್ಪರ್ಧೆಗಳನ್ನು ಆಯೋಜಿಸಲಾಗಿದೆ. 'ನಾ ಭಾರತ್' ಎಂಬ ಚುನಾವಣೆ ಗೀತೆ ರಚಿಸಿ ಮತದಾನ ಜಾಗೃತಿಗೆ ಬಳಸಿಕೊಳ್ಳಲಾಗಿದೆ ಎಂದು ತಿಳಿಸಿದರು.

*******

ಕನಿಷ್ಠ ಬೆಂಬಲ ಬೆಲೆ ಯೋಜನೆಯಡಿ ರೈತರಿಂದ ರಾಗಿ ಖರೀದಿ ಅವಧಿಯನ್ನು ಕೋಲಾರ ಜಿಲ್ಲಾ ವ್ಯಾಪ್ತಿಯ 9 ಖರೀದಿ ಕೇಂದ್ರಗಳಲ್ಲಿ ಜೂನ್ 30 ರವರೆಗೆ ವಿಸ್ತರಿಸಲಾಗಿದೆ.

ಈ ಮೊದಲು ಸರ್ಕಾರದ ಆದೇಶದಂತೆ ಈ ಕೇಂದ್ರಗಳಲ್ಲಿ ರಾಗಿ ಖರೀದಿಗೆ ಈ ತಿಂಗಳ 31 ಕಡೆಯ ದಿನವಾಗಿತ್ತು. ಕನಿಷ್ಠ ಬೆಂಬಲ ಬೆಲೆ ಯೋಜನೆಯಡಿ ನೋಂದಾಯಿಸಿಕೊಂಡಿರುವ ರೈತರಿಂದ ರಾಗಿ ಖರೀದಿ ಪ್ರಕ್ರಿಯೆ ಪ್ರಗತಿಯಲ್ಲಿದ್ದು, ರೈತರು ಈ ಅವಕಾಶದ ಸದುಪಯೋಗ ಪಡೆಯಬೇಕೆಂದು ಜಿಲ್ಲಾ ವ್ಯವಸ್ಥಾಪಕರು ತಿಳಿಸಿದ್ದಾರೆ.

*******

ಈಗ ಸಂಕ್ಷಿಪ್ತ ಸುದ್ದಿಗಳು

ಮಾದರಿ ನೀತಿ ಸಂಹಿತೆ ಉಲ್ಲಂಘಿಸಿ ಅನಧಿಕೃತವಾಗಿ ಸಾಗಿಸುತ್ತಿದ್ದ 629.94 ಲೀಟರ್ ಮದ್ಯ, 26 ಲಕ್ಷ ನಗದು ಹಣವನ್ನು ವಶಪಡಿಸಿಕೊಳ್ಳಲಾಗಿದೆ ಎಂದು ಬಳ್ಳಾರಿ ಜಿಲ್ಲಾ ಚುನಾವಣಾಧಿಕಾರಿ ಹಾಗೂ ಜಿಲ್ಲಾಧಿಕಾರಿ ಪ್ರಶಾಂತ್ ಕುಮಾರ್ ಮಿಶ್ರಾ ಅವರು ತಿಳಿಸಿದ್ದಾರೆ.

ಬೆಂಗಳೂರು ಗ್ರಾಮಾಂತರ ಜಿಲ್ಲೆಯ ದೊಡ್ಡಬಳ್ಳಾಪುರದಲ್ಲಿ ನಿನ್ನೆ ಭಾರತ ಚುನಾವಣಾ ಆಯೋಗ, ಬೆಂಗಳೂರು ಗ್ರಾಮಾಂತರ ಜಿಲ್ಲಾ ಸ್ವೀಪ್ ಸಮಿತಿ, ನಗರಸಭೆ ವತಿಯಿಂದ ಮತದಾರರ ಜಾಗೃತಿ ಜಾಥಾ ಹಮ್ಮಿಕೊಳ್ಳಲಾಗಿತ್ತು.

ಕಾರವಾರ ತಾಲ್ಲೂಕಿನ ಮಾಜಾಳಿ ಗ್ರಾಮದಲ್ಲಿ ಸರ್ಕಾರಿ ಎಂಜಿನಿಯರಿಂಗ್ ಕಾಲೇಜು ಮತ್ತು ಗ್ರಾಮ ಪಂಚಾಯಿತಿ ಸಹಯೋಗದಲ್ಲಿ ಮತದಾರ ಜಾಗೃತಿ ಜಾಥಾ ಹಮ್ಮಿಕೊಳ್ಳಲಾಗಿತ್ತು. ಜಿಲ್ಲಾಧಿಕಾರಿ ಗಂಗೂಬಾಯಿ ಮಾನಕರ ಜಾಥಾಕ್ಕೆ ಚಾಲನೆ ನೀಡಿದರು.

*******

ಕೊನೆಯಲ್ಲಿ ಮತ್ತೊಮ್ಮೆ ಮುಖ್ಯಾಂಶಗಳು

ಸಂವಿಧಾನದ ಆಶಯಗಳನ್ನು ಎತ್ತಿ ಹಿಡಿಯುವಲ್ಲಿ ನ್ಯಾಯಾಂಗದ ಪಾತ್ರ ಅನನ್ಯ– ಮುಖ್ಯಮಂತ್ರಿ ಸಿದ್ದರಾಮಯ್ಯ

ಲೋಕಸಭಾ ಚುನಾವಣೆ: ಮುಕ್ತ ಮತ್ತು ನ್ಯಾಯಸಮ್ಮತ ನಡೆಸಲು 2,100 ಚುನಾವಣಾ ವೀಕ್ಷಕರ ನಿಯೋಜನೆ.

ಈ ಬಾರಿಯ ಲೋಕಸಭಾ ಚುನಾವಣೆಯಲ್ಲಿ ಪಕ್ಷ ಅತಿ ಹೆಚ್ಚು ಸ್ಥಾನಗಳನ್ನು ಗೆಲ್ಲಲಿದೆ– ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ.

ಬೇಸಿಗೆ ಸಂದರ್ಭದಲ್ಲಿ ಹಲವು ಜಿಲ್ಲೆಗಳಲ್ಲಿ ನೀರಿನ ಸಮಸ್ಯೆ: ಆರಂಭಗೊಂಡ ಅಗತ್ಯ ಮುನ್ನೆಚ್ಚರಿಕೆ ಕ್ರಮಗಳು.
[

ಇಲ್ಲಿಗೆ ಪ್ರದೇಶ ಸಮಾಚಾರ ಮುಕ್ತಾಯವಾಯಿತು ..
ನಮ್ಮ ಮುಂದಿನ ರಾಷ್ಟ್ರೀಯ ವಾರ್ತೆ 7 ಗಂಟೆ 35 ನಿಮಿಷಕ್ಕೆ

******